748 ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೌರಿಬಿದನೂರು ತಾಲ್ಲೂಕು ಅತೀ ಹಿಂದುಳಿದ ಗಡಿಭಾಗವಾಗಿರುವುದು ನಿಜವಲ್ಲವೇ;

ಆ) ಈ ಗಡಿಭಾಗಕ್ಕೆ ಸರ್ಕಾರವು ಈಗಲಾದರೂ ಪಾಲಿಟೆಕ್ನಿಕ್ ಕಾಲೇಜು ಮಂಜೂರು ಮಾಡಲು ಕ್ರಮಕೈಗೊಳ್ಳುವುದೇ;

ಇ) ಈ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು?

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು.

ಆ) ಪರಿಶೀಲನೆಯಲ್ಲಿದೆ.

ಇ) ಮುಂಬರುವ ಸಾಲುಗಳಲ್ಲಿ ಅನುದಾನದ ಲಭ್ಯತೆಗನುಗುಣವಾಗಿ ಕಾಲೇಜನ್ನು ಮಂಜೂರು ಮಾಡಲು ಕ್ರಮವಹಿಸಲಾಗುವುದು.

3 ಶ್ರೀ ವಸಂತ ಬಂಗೇರ. ಕೆ (ಬೆಳ್ತಂಗಡಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮುಂಗಡ ಪತ್ರ ಮತ್ತು ಲೆಕ್ಕ ಪತ್ರಗಳ ಅಧಿನಿಯಮದಂತೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ರೂ.500/–ಕ್ಕಿಂತ ಹೆಚ್ಚಿನ ಮೊತ್ತದ ಪಾವತಿಗಳಿಗೆ ಕ್ರಾಸ್ ಚೆಕ್ ಮೂಲಕ ಹಣವನ್ನು ಪಾವತಿಸಲಾ ಗುತ್ತಿದೆಯೇ;

ಆ) ಬೆಳ್ತಂಗಡಿ ತಾಲ್ಲೂಕಿನಲ್ಲಿ ಗ್ರಾಮ ಪಂಚಾಯತ್‌ಗಳಲ್ಲಿ ಈ ನಿಯಮವನ್ನು ಪಾಲಿಸಲಾಗುತ್ತಿದೆಯೇ;

ಇ) ಜಮಾಬಂದಿಯಲ್ಲಿ ಈ ನಿಯಮವನ್ನು ಮೀರಿ ಹಣ ಪಾವತಿಸಿದ ಎಷ್ಟು ಪ್ರಕರಣಗಳನ್ನು ಗುರುತಿಸಲಾಗಿದೆ; ಮತ್ತು ಯಾವ ಕ್ರಮ ಅನುಸರಿಸಲಾಗಿದೆ?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು) :

ಅ) ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು 2006ರ ನಿಯಮ 49ರ ಪ್ರಕಾರ ಸಿಬ್ಬಂದಿ ವರ್ಗದ ವೇತನ ಅಥವಾ ಯಾವುದೇ ಕಾನೂನಿಗನುಗುಣವಾಗಿ ಮಾಡಬೇಕಾದ ಪಾವತಿಗಳನ್ನು ಹೊರತುಪಡಿಸಿ, ಉಳಿದಂತೆ ಪ್ರತಿ ಪ್ರಕರಣದಲ್ಲಿ ರೂ.50.00 ಗಳಿಗಿಂತ ಮೇಲ್ಪಟ್ಟ ಮೊತ್ತದ ಎಲ್ಲಾ ವ್ಯವಹಾರಗಳನ್ನು ಅಕೌಂಟ್ ಪೇಯಿ ಚೆಕ್ ಮುಖಾಂತರವೆ ಮಾಡಬೇಕಿದೆ. ಅದರಂತೆ ಗ್ರಾಮ ಪಂಚಾಯತ್‌ಗಳಲ್ಲಿ ಕ್ರಮ ವಹಿಸಲಾಗುತ್ತಿದೆ.

ಆ) ಹೌದು.

ಇ) ಬೆಳ್ತಂಗಡಿ ತಾಲ್ಲೂಕು ಪಂಚಾಯತಿಯಲ್ಲಿ ಬರುವ ಗ್ರಾಮ ಪಂಚಾಯತಿಗಳಲ್ಲಿ ಯಾವುದೇ ಪ್ರಕರಣಗಳು ವರದಿಯಾಗಿಲ್ಲವೆಂದು ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿರುತ್ತಾರೆ.

845 ಶ್ರೀ ಖಾದರ್ ಯು.ಟಿ. (ಮಂಗಳೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಗಳೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಇದರಿಂದ ಈ ಭಾಗದ ವಿದ್ಯಾರ್ಥಿಗಳಿಗೆ ಅನ್ಯಾಯ ಹಾಗೂ ಉನ್ನತ ವ್ಯಾಸಂಗಕ್ಕೆ ತೊಂದರೆಯಾಗುತ್ತಿಲ್ಲವೇ;

ಇ) ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಈ ಕ್ಷೇತ್ರದಲ್ಲಿ ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

ಈ) ಹಾಗಿದ್ದಲ್ಲಿ, ಎಂದಿನಿಂದ ಸ್ಥಾಪಿಸಲಾಗುವುದು?

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) :

ಅ) ಮೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಇರುತ್ತವೆ.

ಆ) ಉದ್ಭವಿಸುವುದಿಲ್ಲ